23-5-2023
UDAYAVANI - MANIPAL

# ಕಸ್ತೂರ್ಬಾ ಆಸ್ಪತ್ರೆ: ಎಚ್‌ಎಲ್‌ಎ ಪರೀಕ್ಷಾ ಶಿಬಿರ

**ಮಣಿಪಾಲ, ಮೇ 22:** ಕಸ್ತೂರ್ಬಾ ಆಸ್ಪತ್ರೆಯ ಮಕ್ಕಳ ರಕ್ತಶಾಸ್ತ್ರ ಮತ್ತು ಕ್ಯಾನ್ಸರ್ ವಿಭಾಗವು ಸರಕಾರೇತರ ಸಂಸ್ಥೆಯಾದ ಡಿಕೆಎಂಎಸ್ ಸಹಕಾರದೊಂದಿಗೆ ಎಚ್‌ಎಲ್‌ಎ ಪರೀಕ್ಷಾ ಶಿಬಿರ ನಡೆಯಿತು.

ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ| ಅವಿನಾಶ್ ಶೆಟ್ಟಿ ಅವರು, ಸ್ಟೆಮ್‌ಸೆಲ್ ಟ್ರಾನ್ಸ್‌ಪ್ಲ್ಯಾಂಟ್ ಚಿಕಿತ್ಸೆಯು ಥಲಸ್ಸೆಮಿಯಾ ಗುಣಪಡಿಸಲು ಅತ್ಯಂತ ಸೂಕ್ತ ಆಯ್ಕೆಯಾಗಿದೆ ಮತ್ತು ಈ ಸೌಲಭ್ಯವು ಕಸ್ತೂರ್ಬಾ ಆಸ್ಪತ್ರೆಯಲ್ಲಿ ಲಭ್ಯವಿರುವುದರಿಂದ ಈಗ ರೋಗಿಗಳು ಹೆಚ್ಚು ದೂರ ಪ್ರಯಾಣಿಸಬೇಕಾಗಿಲ್ಲ ಎಂದು ತಿಳಿಸಿದರು.

ಕೆಎಂಸಿ ಡೀನ್ ಡಾ| ಪದ್ಮರಾಜ್ ಹೆಗ್ಡೆ ಅವರು ಇಡೀ ತಂಡದ ಪ್ರಯತ್ನವನ್ನು ಶ್ಲಾಘಿಸಿದರು.

ವಿಭಾಗದ ಸಹಾಯಕ ಪ್ರಾಧ್ಯಾಪಿಕೆ ಡಾ| ಅರ್ಚನಾ ಎಂ.ವಿ. ಮಾತನಾಡಿ, ಎಚ್‌ಎಲ್‌ಎ ಟೈಪಿಂಗ್ ಮೂಳೆ ಮಜ್ಜೆಯ ಕಸಿ ಮಾಡಲು ಸಂಭಾವ್ಯ ದಾನಿಗಳನ್ನು ಗುರುತಿಸುವ ಮೊದಲ ಹೆಜ್ಜೆಯಾಗಿದೆ ಎಂದರು. ಸ್ಥಾನಿಕ ವೈದ್ಯೆ ಡಾ| ಸ್ವಾತಿ ಪಿ.ಎಂ. ಅವರು, ಥಲಸ್ಸೇಮಿಯಾ ಮತ್ತು ಕಬ್ಬಿಣದ ಚೆಲೇಷನ್‌ನ ಅಗತ್ಯತೆಯ ಬಗ್ಗೆ ಮಾಹಿತಿ ನೀಡಿದರು. ಆಸ್ಪತ್ರೆಯಲ್ಲಿ ರೋಗಿಗಳಿಗೆ ದೊರೆಯುವ ಆರ್ಥಿಕ ಸಹಾಯದ ಕುರಿತು ಸಹಪ್ರಾಧ್ಯಾಪಕ ಮತ್ತು ವಿಭಾಗದ ಮುಖ್ಯಸ್ಥ ಡಾ| ವಾಸುದೇವ ಭಟ್ ಕೆ. ಮಾತನಾಡಿದರು.

ಶಿಬಿರದಲ್ಲಿ ರೋಗಿಗಳು ಮತ್ತು ಸಂಭಾವ್ಯ ದಾನಿಗಳ 50 ಎಚ್‌ಎಲ್‌ಎ ಮಾದರಿಗಳನ್ನು ಸಂಗ್ರಹಿಸಲಾಯಿತು.

ವಿಜಯವಾಣಿ
VIJAYAVANI » MANGALURU
ಗುರುವಾರ 25 ಮೇ 2023
25 MAY 2023

# ಕೆಎಂಸಿಯಲ್ಲಿ ಎಚ್‌ಎಲ್‌ಎ ತಪಾಸಣೆ

ಉಡುಪಿ: ಜಾಗತಿಕವಾಗಿ ಥಲಸ್ಸೆಮಿಯಾ ಕಾಯಿಲೆ ಕುರಿತು ಜಾಗೃತಿ ಮೂಡಿಸಲು ವಿಶ್ವ ಥಲಸ್ಸೆಮಿಯಾ ದಿನ ಆಚರಿಸಲಾಗುತ್ತಿದ್ದು, ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯ ಮಕ್ಕಳ ರಕ್ತಶಾಸ್ತ್ರ ಮತ್ತು ಕ್ಯಾನ್ಸರ್ ವಿಭಾಗ ಸರ್ಕಾರೇತರ ಸಂಸ್ಥೆ (ಎನ್‌ಜಿಒ) ಡಿಕೆಎಂಎಸ್ ಸಹಕಾರದೊಂದಿಗೆ ಎಚ್‌ಎಲ್‌ಎ ಪರೀಕ್ಷಾ ಶಿಬಿರ ಸೋಮವಾರ ನಡೆಸಿತು. ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ.ಅರ್ಚನಾ ಎಂ.ವಿ. ಮಾತನಾಡಿ, ಎಚ್‌ಎಲ್‌ಎ ಟೈಪಿಂಗ್ ಮೂಳೆ ಮಜ್ಜೆಯ ಕಸಿ ಮಾಡಲು ಸಂಭಾವ್ಯ ದಾನಿಗಳನ್ನು ಗುರುತಿಸುವ ಮೊದಲ ಹೆಜ್ಜೆಯಾಗಿದೆ ಎಂದು ಹೇಳಿದರು. ಕಸ್ತೂರ್ಬಾ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಮಾತನಾಡಿ, ಸ್ಟೆಮ್ ಸೆಲ್ ಟ್ರಾನ್ಸ್‌ಪ್ಲ್ಯಾಂಟ್ ಚಿಕಿತ್ಸೆ ಥಲಸ್ಸೆಮಿಯಾ ಗುಣಪಡಿಸಲು ಅತ್ಯಂತ ಸೂಕ್ತ ಆಯ್ಕೆಯಾಗಿದೆ. ಈ ಸೌಲಭ್ಯ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಲಭ್ಯವಿದೆ ಎಂದರು. ವಿಭಾಗದ ಸ್ಥಾನಿಕ ವೈದ್ಯೆ ಡಾ.ಸ್ವಾತಿ ಪಿ.ಎಂ ಅವರು ಥಲಸ್ಸೆಮಿಯಾ ಮತ್ತು ಕಬ್ಬಿಣದ ಚೆಲೇಷನ್‌ನ ಅಗತ್ಯದ ಬಗ್ಗೆ ಮಾಹಿತಿ ನೀಡಿದರು. ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯಲ್ಲಿ ರೋಗಿಗಳಿಗೆ ದೊರೆಯುವ ಆರ್ಥಿಕ ಸಹಾಯದ ಕುರಿತು ಸಹ ಪ್ರಾಧ್ಯಾಪಕ ಮತ್ತು ವಿಭಾಗದ ಮುಖ್ಯಸ್ಥ ಡಾ.ವಾಸುದೇವ ಭಟ್ ಕೆ. ಮಾತನಾಡಿದರು. ಶಿಬಿರದಲ್ಲಿ ರೋಗಿಗಳು ಮತ್ತು ಸಂಭಾವ್ಯ ದಾನಿಗಳ 50 ಎಚ್‌ಎಲ್‌ಎ ಮಾದರಿಗಳನ್ನು ಸಂಗ್ರಹಿಸಲಾಗಿದೆ. ಕಸ್ತೂರ್ಬಾ ವೈದ್ಯಕೀಯ ಕಾಲೇಜಿನ ಡೀನ್ ಡಾ.ಪದ್ಮರಾಜ್ ಹೆಗ್ಡೆ ಉಪಸ್ಥಿತರಿದ್ದರು.

ಪ್ರಜಾವಾಣಿ
ಮಂಗಳವಾರ • ಮೇ 23, 2023

# ಥಲಸ್ಸೇಮಿಯಾ ಪರೀಕ್ಷಾ ಶಿಬಿರ

ಉಡುಪಿ: ಥಲಸ್ಸೇಮಿಯಾ ಕಾಯಿಲೆ ಕುರಿತು ಜಾಗೃತಿ ಮೂಡಿಸಲು ಮತ್ತು ಕಾಯಿಲೆ ಪೀಡಿತ ಮಕ್ಕಳ ಆರೈಕೆದಾರರಿಗೆ ಬೆಂಬಲ ನೀಡಲು ಪ್ರತಿವರ್ಷ ವಿಶ್ವ ಥಲಸ್ಸೇಮಿಯಾ ದಿನ ಆಚರಿಸಲಾಗುತ್ತಿದ್ದು, ಮಣಿಪಾಲದ ಕಸ್ತೂರಬಾ ಆಸ್ಪತ್ರೆಯ ಮಕ್ಕಳ ರಕ್ತಶಾಸ್ತ್ರ ಮತ್ತು ಕ್ಯಾನ್ಸರ್ ವಿಭಾಗ ಹಾಗೂ ಡಿಕೆಎಂಎಸ್ ಸಂಸ್ಥೆಯ ಸಹಕಾರದೊಂದಿಗೆ ಎಚ್‌ಎಲ್‌ಎ ಪರೀಕ್ಷಾ ಶಿಬಿರ ನಡೆಸಲಾಯಿತು.

ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ ಮಾತನಾಡಿ, ಸ್ಟೆಮ್ ಸೆಲ್ ಟ್ರಾನ್ಸ್‌ಪ್ಲಾಂಟ್ ಚಿಕಿತ್ಸೆಯು ಥಲಸ್ಸೇಮಿಯಾ ಗುಣಪಡಿಸಲು ಅತ್ಯಂತ ಸೂಕ್ತ ಆಯ್ಕೆಯಾಗಿದ್ದು, ಈ ಸೌಲಭ್ಯವು ಕಸ್ತೂರಬಾ ಆಸ್ಪತ್ರೆಯಲ್ಲಿ ಲಭ್ಯವಿರುವುದರಿಂದ ರೋಗಿಗಳಿಗೆ ಹೆಚ್ಚು ಅನುಕೂಲವಾಗಲಿದೆ ಎಂದರು.

ಶಿಬಿರದಲ್ಲಿ ರೋಗಿಗಳು ಮತ್ತು ದಾನಿಗಳ 50 ಎಚ್‌ಎಲ್‌ಎ ಮಾದರಿಗಳನ್ನು ಸಂಗ್ರಹಿಸಲಾಯಿತು. ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಅರ್ಚನಾ ಎಂ.ವಿ. ಮಾತನಾಡಿದರು. ವಿಭಾಗದ ಸ್ಥಾನಿಕ ವೈದ್ಯೆ ಡಾ.ಪಿ. ಎಂ.ಸ್ವಾತಿ ಥಲಸ್ಸೇಮಿಯಾ ಕುರಿತು ಅವಲೋಕನವನ್ನು ನೀಡಿದರು. ಆಸ್ಪತ್ರೆಯಲ್ಲಿ ರೋಗಿಗಳಿಗೆ ದೊರೆಯುವ ಆರ್ಥಿಕ ಸಹಾಯದ ಕುರಿತು ವಿಭಾಗದ ಮುಖ್ಯಸ್ಥ ಡಾ. ವಾಸುದೇವ ಭಟ್ ಮಾತನಾಡಿದರು.

ಕಸ್ತೂರ್ಬಾ ವೈದ್ಯಕೀಯ ಕಾಲೇಜಿನ ಡೀನ್ ಡಾ.ಪದ್ಮರಾಜ್ ಹೆಗ್ಡೆ ತಂಡದ ಪ್ರಯತ್ನವನ್ನು ಶ್ಲಾಘಿಸಿದರು.

ನಮ್ಮ UDUPI BULLETIN

# ವಿಶ್ವ ಥಲಸ್ಸೇಮಿಯಾ ದಿನ: ಮಣಿಪಾಲ ಕೆ.ಎಂ.ಸಿಯಲ್ಲಿ ಎಚ್‌ಎಲ್‌ಎ ಪರೀಕ್ಷಾ ಶಿಬಿರ

By Udupi Bulletin News Desk - May 23, 2023 0




**ಮಣಿಪಾಲ, ಮೇ 22:** ಜಾಗತಿಕವಾಗಿ ಥಲಸ್ಸೆಮಿಯಾ ಕಾಯಿಲೆ ಕುರಿತು ಜಾಗೃತಿ ಮೂಡಿಸಲು ಮತ್ತು ಥಲಸ್ಸೆಮಿಯಾ ಪೀಡಿತ ಮಕ್ಕಳಿಗೆ ತಮ್ಮ ಆರೈಕೆದಾರರಿಗೆ ಬೆಂಬಲ ವ್ಯಕ್ತಪಡಿಸಲು ಪ್ರತಿ ವರ್ಷ ವಿಶ್ವ ಥಲಸ್ಸೆಮಿಯಾ ದಿನವನ್ನು ಆಚರಿಸಲಾಗುತ್ತದೆ. ಈ ವರ್ಷದ ಧ್ಯೇಯವಾಕ್ಯ 'ಎಚ್ಚರಿಕೆಯಿಂದಿರಿ, ಹಂಚಿಕೊಳ್ಳಿ, ಕಾಳಜಿ : ಥಲಸ್ಸೆಮಿಯಾ ಕುರಿತು ಆರೈಕೆಯ ಅಂತರವನ್ನು ತಗ್ಗಿಸಲು ಶಿಕ್ಷಣವನ್ನು ಬಲಪಡಿಸುವುದು'. ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯ ಮಕ್ಕಳ ರಕ್ತಶಾಸ್ತ್ರ ಮತ್ತು ಕ್ಯಾನ್ಸರ್ ವಿಭಾಗವು ಸರ್ಕಾರೇತರ ಸಂಸ್ಥೆ (ಎನ್‌ಜಿಒ) ಡಿಕೆಎಂಎಸ್ ಸಹಕಾರದೊಂದಿಗೆ ಎಚ್‌ಎಲ್‌ಎ ಪರೀಕ್ಷಾ ಶಿಬಿರವನ್ನು ನಡೆಸಿತು.

ಶಿಬಿರದಲ್ಲಿ ರೋಗಿಗಳು ಮತ್ತು ಸಂಭಾವ್ಯ ದಾನಿಗಳ 50 ಎಚ್‌ಎಲ್‌ಎ ಮಾದರಿಗಳನ್ನು ಸಂಗ್ರಹಿಸಲಾಗಿದೆ. ಈ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಅರ್ಚನಾ ಎಂ.ವಿ. ಮಾತನಾಡಿ, ಎಚ್‌ಎಲ್‌ಎ ಟೈಪಿಂಗ್ ಮೂಳೆ ಮಜ್ಜೆಯ ಕಸಿ ಮಾಡಲು ಸಂಭಾವ್ಯ ದಾನಿಗಳನ್ನು ಗುರುತಿಸುವ ಮೊದಲ ಹೆಜ್ಜೆಯಾಗಿದೆ ಎಂದು ಹೇಳಿದರು. ವಿಭಾಗದ ಸ್ನಾನಿಕ ವೈದ್ಯ ಡಾ.ಸ್ವಾತಿ ಪಿ.ಎಂ ಅವರು ಥಲಸ್ಸೇಮಿಯಾ ಮತ್ತು ಕಬ್ಬಿಣದ ಚೆಲೇಷನ್‌ನ ಅಗತ್ಯತೆಯ ಅವಲೋಕನವನ್ನು ನೀಡಿದರು. ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯಲ್ಲಿ ರೋಗಿಗಳಿಗೆ ದೊರಯುವ ಆರ್ಥಿಕ ಸಹಾಯದ ಕುರಿತು ಸಹ ಪ್ರಾಧ್ಯಾಪಕ ಮತ್ತು ವಿಭಾಗದ ಮುಖ್ಯಸ್ಥ ಡಾ. ವಾಸುದೇವ ಭಟ್ ಕೆ ಮಾತನಾಡಿದರು.

ಕಸ್ತೂರ್ಬಾ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ ಅವರು ಸ್ಟೆಮ್ ಸೆಲ್ ಟ್ರಾನ್ಸ್‌ಪ್ಲಾಂಟ್ ಚಿಕಿತ್ಸೆಯು ಥಲಸ್ಸೆಮಿಯಾ ಗುಣಪಡಿಸಲು ಅತ್ಯಂತ ಸೂಕ್ತ ಆಯ್ಕೆಯಾಗಿದೆ ಮತ್ತು ಈ ಸೌಲಭ್ಯವು ಕಸ್ತೂರ್ಬಾ ಆಸ್ಪತ್ರೆಯಲ್ಲಿ ಲಭ್ಯವಿರುವುದರಿಂದ ಈಗ ರೋಗಿಗಳು ಹೆಚ್ಚು ದೂರ ಪ್ರಯಾಣಿಸಬೇಕಾಗಿಲ್ಲ ಎಂದರು. ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜಿನ ಡೀನ್ ಡಾ. ಪದ್ಮರಾಜ್ ಹೆಗ್ಡೆ ಅವರು ಇಡೀ ತಂಡದ ಪ್ರಯತ್ನವನ್ನು ಶ್ಲಾಘಿಸಿದರು.